# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 357 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 07.07.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶಿಸಿದೆಯೇ; (ಆದೇಶದ ಪ್ರತಿಯನ್ನು ಒದಗಿಸುವುದು) | ಯೋಜನೆ, ಕಾರ್ಯಕ್ರಮ ಸಂಯೋಜನ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್. 02 ಎಸ್ಎಸ್ಎಂ 2022, ದಿನಾಂಕ:22-02-2022 ರಲ್ಲಿ ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಜನನ ಮರಣ ನೋಂದಣಿ ಅಧಿನಿಯಮ, 1969 ರ ಪ್ರಕರಣ 7(1) ರನ್ವಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ.<br><br>ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ. |
| (ಆ) | ಗ್ರಾಮ ಪಂಚಾಯಿತಿಯಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರ ವಿತರಣೆ ಪ್ರಾರಂಭವಾಗಿದೆಯೇ; ಪ್ರಾರಂಭವಾಗದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; | ಇ-ಜನ್ಮ ತಂತ್ರಾಂಶದಲ್ಲಿ ನೋಂದಾಯಿಸಿದ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಪ್ರತಿಗಳನ್ನು ಬಾಪೂಜಿ ಸೇವಾ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ. |
| (ಇ) | ಗ್ರಾಮ ಪಂಚಾಯಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಹಲವು ಯೋಜನೆ ಜಾರಿಗೊಳಿಸುವುದು ಮತ್ತು ಮೂಲ ಸೌಕರ್ಯ ಒದಗಿಸುವ ಜವಾಬ್ದಾರಿಯೂ ಇರುವ ಕಾರಣ ಸದರಿ ಕೆಲಸಕ್ಕೆ ಹೆಚ್ಚುವರಿ ಸಿಬ್ಬಂದಿ ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಪ್ರಸ್ತುತ ಇಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ:RDPR 317 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 357 ಕ್ಕೆ ಅನುಬಂ

**ಕರ್ನಾಟಕ ಸರ್ಕಾರ ನಡವಳಿಗಳು**

**ವಿಷಯ:** ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣಗಳ ನೋಂದಣಾಧಿಕಾರಿಗಳನ್ನಾಗಿ ಹಾಗೂ ಗ್ರಾಮ ಲೆಕ್ಕಿಗರನ್ನು ಜನನ, ಮರಣಗಳ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: IFS 316 SMM 90, ದಿನಾಂಕ: 15.03.1993.
2. ಸರ್ಕಾರ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಗ್ರಾ.ಅ.ಪಂ.ರಾಜ್ ಪ್ರ.ಕಾ ಆಶಾ.05.2020, ದಿನಾಂಕ: 06.06.2020.
3. ಯೋಜನೆ ಇಲಾಖೆಯ ಅರೆ ಸರ್ಕಾರಿ ಪತ್ರ ಸಂಖ್ಯೆ: ಆಸಾನಿ 30 ಜಮನೋ 2020, ದಿನಾಂಕ: 13.07.2020.
4. ಭಾರತದ ಮಹಾ ನೋಂದಣಾಧಿಕಾರಿಗಳ ಪತ್ರ ಸಂಖ್ಯೆ: 1/10/2004-VS (CRS)/377, ದಿನಾಂಕ: 31.07.2020.
5. ದಿನಾಂಕ: 09.09.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

* * * * *

**ಪ್ರಸ್ತಾವನೆ.**

ಜನನ, ಮರಣ ನೋಂದಣಿ ಅಧಿನಿಯಮ, 1969ರ ಪ್ರಕರಣ 7(1)ರ ಪ್ರಕಾರ ಗ್ರಾಮೀಣ ಪ್ರದೇಶದ ಕಂದಾಯ ಗ್ರಾಮಗಳಿಗೆ ಜನನ, ಮರಣ ನೋಂದಣಿ ಕಾರ್ಯವನ್ನು ನಿರ್ವಹಿಸಲು ಗ್ರಾಮ ಲೆಕ್ಕಿಗರನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಉಲ್ಲೇಖ (1)ರ ಸರ್ಕಾರದ ಅಧಿಸೂಚನೆಯಲ್ಲಿ ನೇಮಿಸಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 58ರ ಪ್ರಕಾರ, ಗ್ರಾಮ ಪಂಚಾಯಿತಿಯು ಸ್ಥಳೀಯ ಸ್ವಯಂ-ಸರ್ಕಾರವಾಗಿದ್ದು, ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ವರದಿ ಮಾಡುವುದನ್ನು ಖಚಿತ ಪಡಿಸಿಕೊಳ್ಳುವುದು ಮತ್ತು ಅನುಸೂಚಿ 1ರಲ್ಲಿ ಗ್ರಾಮ ಪಂಚಾಯಿತಿಯ ಜನರ ಎಲ್ಲಾ ದತ್ತಾಂಶವು ಲಭ್ಯವಾಗುವಂತೆ ಮಾಡುವುದು ಗ್ರಾಮ ಪಂಚಾಯಿತಿಯ ಕಡ್ಡಾಯ ಪ್ರಕಾರ್ಯವಾಗಿರುತ್ತದೆ. ಆದಕಾರಣ, ಜನನ, ಮರಣ ನೋಂದಣಿ ಅಧಿನಿಯಮ 1969 ರನ್ವಯ ಗ್ರಾಮ ಪಂಚಾಯಿತಿ ಹಂತದಲ್ಲಿ ಜನನ, ಮರಣ ಪ್ರಮಾಣ ಪತ್ರಗಳನ್ನು ನೀಡಲು ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಿ ಮಾಡಲು ಆದೇಶವನ್ನು ಹೊರಡಿಸುವಂತೆ ಉಲ್ಲೇಖ (2)ರ ಅರೆ ಸರ್ಕಾರಿ ಪತ್ರದಲ್ಲಿ ಸರ್ಕಾರ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಕೋರಿರುತ್ತಾರೆ.

ಗ್ರಾಮೀಣ ಪ್ರದೇಶದಲ್ಲಿ ನಾಗರಿಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇಕಡಾ 100 ರಷ್ಟು ಜನನ, ಮರಣ ನೋಂದಣಿ ಘಟನೆಗಳನ್ನು ದಾಖಲಿಸಲು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಮಾಡಲು ಉಲ್ಲೇಖ (3)ರ ಪತ್ರದಲ್ಲಿ ಭಾರತ ಸರ್ಕಾರದ ಜನನ, ಮರಣ ಮಹಾ ನೋಂದಣಾಧಿಕಾರಿಗಳ ಅನುಮೋದನೆಯನ್ನು ಕೋರಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಜನನ, ಮರಣ ನೋಂದಣಿ ಕಾಯ್ದೆ 1969ರ ಪ್ರಕರಣ 7(1) ರಂತೆ ಕ್ರಮ ಜರುಗಿಸಲು ಭಾರತ ಸರ್ಕಾರದ ಜನನ, ಮರಣ ಮಹಾ ನೋಂದಣಾಧಿಕಾರಿಗಳು ಉಲ್ಲೇಖ (4)ರ ಪತ್ರದಲ್ಲಿ ತಿಳಿಸಿರುತ್ತಾರೆ.

ದಿನಾಂಕ: 09.09.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯಲ್ಲಿ ಗ್ರಾಮೀಣ ಪ್ರದೇಶದ ಜನನ ಮತ್ತು ಮರಣ ನೋಂದಣಿಯನ್ನು ಗ್ರಾಮ ಪಂಚಾಯಿತಿಗಳು ಹೆಚ್ಚುವರಿಯಾಗಿ ಮಾಡಬೇಕು. ಒಂದು ವೇಳೆ ಗ್ರಾಮ ಪಂಚಾಯಿತಿ ಹಾಗೂ ಗ್ರಾಮ ಲೆಕ್ಕಾಧಿಕಾರಿಯ ಕಾರ್ಯ ವ್ಯಾಪ್ತಿಯ ಬಗ್ಗೆ ತಕಾರಾರು ಬಂದಲ್ಲಿ ತತ್ಸಬಂಧವಾಗಿ ಗ್ರಾಮ ಪಂಚಾಯಿತಿಗಳು ತೀರ್ಮಾನ ತೆಗೆದು ಕೊಳ್ಳಬೇಕೆಂದು ಸೂಚಿಸಲಾಗಿದೆ.

ದಿನಾಂಕ: 24.12.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಹಾಗೂ ಗ್ರಾಮ ಲೆಕ್ಕಿಗರನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಕ ಮಾಡಲು ಕಂದಾಯ ಇಲಾಖೆಯು ಸಹಮತಿಯನ್ನು ನೀಡಿರುತ್ತದೆ.

ಮೇಲಿನ ಪ್ರಸ್ತಾವನೆಗಳ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಹಾಗೂ ಗ್ರಾಮ ಲೆಕ್ಕಿಗರನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಲು ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಪಿಡಿಎಸ್ 02 ಎಸ್‌ಎಸ್‌ಎಂ 2022 ಬೆಂಗಳೂರು.**

**ದಿನಾಂಕ: 22ನೇ ಫೆಬ್ರುವರಿ 2022**

ಗ್ರಾಮೀಣ ಪ್ರದೇಶದಲ್ಲಿ ನಾಗರೀಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇಕಡಾ 100 ರಷ್ಟು ಜನನ, ಮರಣ ನೋಂದಣಿ ಘಟನೆಗಳನ್ನು ದಾಖಲಿಸಲು ಉಲ್ಲೇಖ (1) ರ ಸರ್ಕಾರದ ಅಧಿಸೂಚನೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಲೆಕ್ಕಿಗರನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಕ ಮಾಡಿರುವುದನ್ನು ಮಾರ್ಪಾಡಿಸಿ, ಜನನ, ಮರಣ ನೋಂದಣಿ ಅಧಿನಿಯಮ 1969ರ 7(1) ರನ್ವಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಹಾಗೂ ಪ್ರಕರಣ 7(5) ರನ್ವಯ ಗ್ರಾಮಗಳ ಗ್ರಾಮ ಲೆಕ್ಕಿಗರನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಿ ಆದೇಶಿಸಲಾಗಿದೆ.

**ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

( ಪಾರ್ಪಣ್ಣ. )

**ಸರ್ಕಾರದ ಅಧೀನ ಕಾರ್ಯದರ್ಶಿಗಳು (ಎಸ್-1)**
**ಯೋಜನೆ, ಕಾರ್ಯಕ್ರಮ ಸಂಯೋಜನೆ**
**ಮತ್ತು ಸಾಂಖ್ಯಿಕ ಇಲಾಖೆ.**

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್ (ಪಂಚಾಯತ್ ರಾಜ್) ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಜನಗಣತಿ ನಿರ್ದೇಶನಾಲಯ, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
11. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
12. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ನಿರ್ದೇಶಕರು, ಗ್ರಾಮೀಣಾಭಿವೃದ್ಧಿ & ಪಂಚಾಯತ್‌ರಾಜ್, (ಪಂಚಾಯತ್ ರಾಜ್) ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಜನನ, ಮರಣ ನೋಂದಣಾಧಿಕಾರಿಗಳಿಗೆ.
15. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
16. ಅಪರ ನಿರ್ದೇಶಕರು ಹಾಗೂ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳು, 7ನೇ ಮಹಡಿ, ಸರ್.ಎಂ.ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
17. ಎಲ್ಲಾ ಜಂಟಿ ನಿರ್ದೇಶಕರುಗಳು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
18. ರಾಜ್ಯದ ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಜನನ, ಮರಣ ನೋಂದಣಾಧಿಕಾರಿಗಳಿಗೆ.
19. ರಾಜ್ಯದ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರುಗಳಿಗೆ.
20. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು- ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
21. ಕಛೇರಿ ಪ್ರತಿ.